159ನ೯೮
100

<u>**ಕರ್ನಾಟಕ ವಿಧಾನ ಪರಿಷತ್ತು**</u>

**ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಮಧು ಜಿ. ಮಾದೇಗೌಡ ಇವರು ನಿಯಮ-72ರ ಮೇರೆಗೆ ಮಂಡಿಸಿರುವ ಗಮನ ಸಳೆಯುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಉತ್ತರ.**

**ವಿಷಯ: ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ಗದಗ ಇವರು ಗ್ರಾಪಂಗಳಲ್ಲಿನ ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ಹುದ್ದೆಗಳ ವೃಂದ ಪುನರ್‌ರಚನೆ ಹಾಗೂ ಮೇಲ್ದರ್ಜೆಗೇರಿಸುವ ಕುರಿತು ಮಾಡಿರುವ ಶಿಫಾರಸುಗಳನ್ನು ಪರಿಶೀಲಿಸಲು ಆಯುಕ್ತರು, ಪಂಚಾಯತ್ ರಾಜ್ ಇವರ ಅಧ್ಯಕ್ಷತೆಯಲ್ಲಿ ರಚಿಸಲಾದ ಪರಿಶೀಲನಾ ಸಮಿತಿಯು ತನ್ನ ವರದಿಯಲ್ಲಿ "ದ್ವಿತೀಯ ದರ್ಜೆ ಲೆಕ್ಕ ಸಹಾಯಕರ (SDAA) ಹುದ್ದೆಗಳನ್ನು ಪ್ರಥಮ ದರ್ಜೆ ಲೆಕ್ಕ ಸಹಾಯಕರ (FDAA) ಹುದ್ದೆಗಳನ್ನಾಗಿ ಮೇಲ್ದರ್ಜೆಗೇರಿಸುವ ಕುರಿತು ಮಾಡಿರುವ ಶಿಫಾರಸುಗಳನ್ನು ಪರಿಗಣಿಸಬಹುದಾಗಿರುತ್ತದೆ" ಎಂದು ಅಭಿಪ್ರಾಯಿಸಿದೆ. ಪ್ರಸ್ತುತ ಗ್ರಾಪಂಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ SDAAಗಳಿಗೆ ಸೇವಾವಧಿಯಲ್ಲಿ ಮುಂಬಡ್ತಿಗೆ ಹೆಚ್ಚಿನ ಅವಕಾಶಗಳು ಲಭ್ಯವಿಲ್ಲದ ಕಾರಣ, ಒಂದೇ ಹುದ್ದೆಯಲ್ಲಿ ದೀರ್ಘಕಾಲ ಸೇವೆ ಸಲ್ಲಿಸುವ ಪರಿಸ್ಥಿತಿ ಇದೆ. ಇದರಿಂದ ಅರ್ಹತೆ, ಅನುಭವ ಹಾಗೂ ಸೇವಾ ಹಿರಿತನ ಹೊಂದಿರುವ ಸಿಬ್ಬಂದಿಗಳಲ್ಲಿ ವೃತ್ತಿ ಪ್ರಗತಿಯ ಅವಕಾಶಗಳ ಕೊರತೆ ಉಂಟಾಗಿರುವ ಬಗ್ಗೆ ಹಾಗೂ ಪ್ರಸ್ತುತ ಗ್ರಾಪಂಗಳಿಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳಿಂದ ವಿವಿಧ ಯೋಜನೆಗಳಡಿ ಹೆಚ್ಚಿನ ಪ್ರಮಾಣದಲ್ಲಿ ಅನುದಾನ ಲಭ್ಯವಾಗುತ್ತಿರುವ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲಾ ಗ್ರೇಡ್-2 ಗ್ರಾಪಂಗಳಲ್ಲಿಯೂ SDAA ಹುದ್ದೆಗಳನ್ನು ಸೃಜಿಸುವ ಅಗತ್ಯತೆ ಇರುವ ಬಗ್ಗೆ ಪರಿಶೀಲನಾ ಸಮಿತಿ ತನ್ನ ವರದಿಯಲ್ಲಿ ಸ್ಪಷ್ಟವಾಗಿ ಅಭಿಪ್ರಾಯಿಸಿರುತ್ತದೆ.**

**ಆದುದರಿಂದ, ಆಯುಕ್ತರು, ಪಂಚಾಯತ್ ರಾಜ್ ಇವರ ಅಧ್ಯಕ್ಷತೆಯಲ್ಲಿ ರಚಿಸಲಾದ ಪರಿಶೀಲನಾ ಸಮಿತಿಯೇ ಈ ಕುರಿತು ಸ್ಪಷ್ಟವಾಗಿ ಶಿಫಾರಸು ಮಾಡಿರುವ ಹಿನ್ನೆಲೆಯಲ್ಲಿ, ಈ ಶಿಫಾರಸುಗಳನ್ನು ಕೇವಲ ವರದಿಗೆ ಸೀಮಿತಗೊಳಿಸದೆ ಸರ್ಕಾರವು ಆದ್ಯತೆಯ ಮೇರೆಗೆ ಅನುಷ್ಠಾನಗೊಳಿಸುವುದು ಅತ್ಯಂತ ಅಗತ್ಯವಾಗಿರುವ ಬಗ್ಗೆ.**

**ಉತ್ತರ:**

- ರಾಜ್ಯದ ಗ್ರಾಮ ಪಂಚಾಯಿತಿಗಳಲ್ಲಿನ ಲೆಕ್ಕ ವಿಭಾಗದ ಕಾರ್ಯದೊತ್ತಡ ಹಾಗೂ ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳಿಗೆ ಲೆಕ್ಕ ಸಹಾಯಕರ ಹುದ್ದೆಯ ಅವಶ್ಯಕತೆ ಇರುವ ಬಗ್ಗೆ ಕಾರ್ಯಾಧ್ಯಯನ ನಡೆಸಿ, ವರದಿ ಸಲ್ಲಿಸುವಂತೆ ಕುಲಸಚಿವರು, ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ಗದಗ ರವರನ್ನು ಕೋರಲಾಗಿತ್ತು.
- ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ಗದಗ ವತಿಯಿಂದ ಈ ಕುರಿತು ಕಾರ್ಯಾಧ್ಯಯನ ನಡೆಸಿ, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯಕ್ಕೆ ವರದಿಯನ್ನು ಸಲ್ಲಿಸಲಾಗಿರುತ್ತದೆ.
- ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿನ ವಿವಿಧ ವೃಂದಗಳ ನೌಕರರ ಬೇಡಿಕೆಗಳ ಕುರಿತು ಪರಿಶೀಲಿಸಿ, ವರದಿಯನ್ನು ಸಲ್ಲಿಸಲು ರಚಿಸಲಾಗಿದ್ದ, ಆಯುಕ್ತರು, ಪಂಚಾಯತ್ ರಾಜ್ ಆಯುಕ್ತಾಲಯರವರ ಅಧ್ಯಕ್ಷತೆಯ ಸಮಿತಿಯಲ್ಲಿ ಈ ವರದಿಯನ್ನು ಪರಿಶೀಲಿಸಿದ್ದು, ಸಮಿತಿಯ ಶಿಫಾರಸ್ಸುಗಳೊಂದಿಗೆ ಸರ್ಕಾರಕ್ಕೆ ವರದಿಯನ್ನು ಸಲ್ಲಿಸಲಾಗಿರುತ್ತದೆ.
- ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ಗದಗರವರ ವರದಿಯ ಕುರಿತು ಆಯುಕ್ತರು, ಪಂಚಾಯತ್ ರಾಜ್ ಆಯುಕ್ತಾಲಯರವರ ಅಧ್ಯಕ್ಷತೆಯ ಸಮಿತಿಯು ಸಲ್ಲಿಸಿರುವ ಶಿಫಾರಸ್ಸು ಸರ್ಕಾರದಲ್ಲಿ ಪರಿಶೀಲನೆಯಲ್ಲಿರುತ್ತದೆ.

ಸಂಖ್ಯೆ:RDPR 826 GPA 2026

**(ಈಶ್ವರ ಬಿ. ಖಂಡ್ರೆ)**
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು